ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಪ್ರಾಥಮಿಕ/ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಕೊರತೆ ಕುರಿತು

ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1027 (1203) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಬಹುತೇಕ ಕಡೆಗಳಲ್ಲಿ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಗ್ರಾಮೀಣ ಪ್ರದೇಶಗಳ ಬಡ ಜನರಿಗೆ ಉತ್ತಮ ಚಿಕಿತ್ಸೆ ದೊರೆಯದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸದರಿ ಸಮುದಾಯ ಕೇಂದ್ರಗಳಿಗೆ ಅಗತ್ಯ ವೈದ್ಯರ ಹಾಗೂ ಸಿಬ್ಬಂದಿಗಳ ನೇಮಕಾತಿ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ; ಇದಕ್ಕೆ ಬೇಕಾದ ಕಾಲಾವಕಾಶ ಎಷ್ಟು ?